# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 128
2) ಸದಸ್ಯರ ಹೆಸರು : ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸಬೇಕಾದ ದಿನಾಂಕ : 28-01-2026
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಹೊರರಾಜ್ಯದ ಮೀನುಗಾರರು ಅಕ್ರಮವಾಗಿ ಮೀನುಗಾರಿಕೆ ಮಾಡುತ್ತಿದ್ದು, ಇದರಿಂದ ಸ್ಥಳೀಯ ಮಟ್ಟದ ಮೀನುಗಾರರು ಪರದಾಡುವಂತಹ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅಕ್ರಮ ಮೀನುಗಾರಿಕೆಯನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | ಹೌದು.<br><br>ಜಲಸಂಪನ್ಮೂಲಗಳ ಸುತ್ತಮುತ್ತಲಿನ 5 ಕಿ.ಮೀ. ಒಳಗಡೆ ವಾಸಿಸುವ ಮೀನುಗಾರರಿಗೆ ಮೀನುಗಾರಿಕೆ ಮಾಡಲು ಪರವಾನಿಗೆಗಳನ್ನು ನೀಡಲಾಗುತ್ತಿದೆ. ಹೊರರಾಜ್ಯದ ಮೀನುಗಾರರಿಗೆ ಪರವಾನಿಗೆಗಳನ್ನು ವಿತರಿಸುವುದಿಲ್ಲ. ಆದರೆ, ಇತ್ತೀಚೆಗೆ ಕೆಲವು ಮೀನುಗಾರರು ಅಕ್ರಮವಾಗಿ ಆಲಮಟ್ಟಿ ಜಲಾಶಯದಲ್ಲಿ ಮೀನುಗಾರಿಕೆ ಮಾಡುತ್ತಿರುವ ಬಗ್ಗೆ ಇಲಾಖೆಯ ಗಮನಕ್ಕೆ ಬಂದ ಕೂಡಲೇ ಅಧಿಕಾರಿಗಳು ಸ್ಥಳೀಯ ಪೋಲೀಸ್‌ರವರ ಸಹಕಾರದೊಂದಿಗೆ ದಾಳಿ ಮಾಡಿ ದೋಣಿ, ಬಲೆ ಮತ್ತು ಹರಿಗೋಲುಗಳನ್ನು ವಶಪಡಿಸಿಕೊಂಡು ಪೊಲೀಸ್ ಠಾಣೆಯಲ್ಲಿ ಮತ್ತು ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗಿರುತ್ತದೆ.<br><br>ಅಲ್ಲದೆ, ಸ್ಥಳೀಯ ಅಧಿಕಾರಿಗಳಿಗೆ ಆಗಿಂದಾಗ್ಗೆ ಅನಿರೀಕ್ಷಿತ ಭೇಟಿ ನೀಡಿ, ಈ ರೀತಿ ಅಕ್ರಮ ಮೀನುಗಾರಿಕೆ ಮಾಡದಂತೆ ಎಚ್ಚರಿಕೆ ನೀಡಲು ಕ್ರಮವಹಿಸುವಂತೆ ಸೂಚಿಸಲಾಗಿದೆ. ಹಾಗೆಯೇ ಹೊರರಾಜ್ಯದ ಮೀನುಗಾರರಿಗೆ ಕೂಡಲೇ ಜಲಾಶಯದ ವ್ಯಾಪ್ತಿಯನ್ನು ಬಿಟ್ಟು ತೆರಳುವಂತೆ ಎಚ್ಚರಿಕೆ ನೀಡಲಾಗಿದೆ. |
| ಆ) | ಅಕ್ರಮವಾಗಿ ಮೀನು ಹಿಡಿಯುವವರ ವಿರುದ್ಧ ಕ್ರಮ ಕೈಗೊಳ್ಳಲು ಇರುವ ನಿಯಮಗಳಾವುವು? | ಅಕ್ರಮವಾಗಿ ಮೀನು ಹಿಡಿಯುವವರ ವಿರುದ್ಧ ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳಲು ಸಾರ್ವಜನಿಕ ಸ್ವತ್ತುಗಳನ್ನು ಕಳ್ಳತನ ಮಾಡಿದ ಆರೋಪದಡಿ ಪೊಲೀಸ್ ಠಾಣೆಯಲ್ಲಿ ಮತ್ತು ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-11 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು